ಕಾರಂಜಾ ನೀರಾವರಿ ಯೋಜನೆಯಿಂದ ಹೊಸ ಏತ ನೀರಾವರಿ ಯೋಜನೆಯನ್ನು ಪ್ರಾರಂಭಿಸುವುದು.

2408(3128) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರ್) :— ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಾರಂಜಾ ನೀರಾವರಿ ಯೋಜನೆಯ ಮೂಲಕವಾಗಿ ಎಷ್ಟು ಏತ ನೀರಾವರಿ ಯೋಜನೆಗಳು ಕಾರ್ಯಗತವಾಗಿದೆ;

ಆ) ಹುಲಸೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಳ್ಳಿಖೇಡ ಗ್ರಾಮದ ಮಾರ್ಗವಾಗಿ ಡಾಕುಳಗಿ ಹಿಲಾಲಪುರ ಗ್ರಾಮಗಳಲ್ಲಿ ನೀರಾವರಿ ಸೌಲಭ್ಯಗಳ ಕೊರತೆ ಇರುವುದರಿಂದ ಈ ಭಾಗದ ರೈತರ ಸಾವಿರಾರು ಎಕರೆ ಪ್ರದೇಶಕ್ಕೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ಹೊಸದಾಗಿ ಏತ ನೀರಾವರಿ ಯೋಜನೆಯನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರ ಪರಿಶೀಲನೆ ನಡೆಸುವುದೇ?

ಇ) ಹಾಗಿಲ್ಲದಿದ್ದಲ್ಲಿ ಇದಕ್ಕೆ ಕಾರಣಗಳೇನು?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು) :—

ಅ) ಕಾರಂಜಾ ನೀರಾವರಿ ಯೋಜನೆಯಲ್ಲಿ (ಬಲದಂಡೆಯಲ್ಲಿ) ಒಂದು ಮುಂದಂಡೆ ಏತ ನೀರಾವರಿ ಯೋಜನೆ ಕಾರ್ಯಗತವಾಗುತ್ತಿದೆ.

ಆ) ಪರಿಶೀಲಿಸಲಾಗುತ್ತಿದೆ.

ಇ) ಈಗಾಗಲೇ ಸದರಿ ಯೋಜನೆಯ ಕಾರ್ಯ ಸಾಧ್ಯತೆ ಬಗ್ಗೆ ಪರಿಶೀಲಿಸುತ್ತಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಿಂದ ಹೊರಬಿದ್ದ ಬೂದಿಯಿಂದ ಕೃಷ್ಣ ನದಿ ನೀರು ಕಲುಷಿತಗೊಂಡಿರುವುದು.

2410(2761) ಶ್ರೀ ರಾಜುಗೌಡ ಜಿ. (ಹನ್ನೂರು) :— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶಕ್ತಿನಗರ ರಾಯಚೂರು ಶಾಖೋತ್ಪನ್ನ ವಿದ್ಯುತ್ ಸ್ಥಾವರಗಳಿಂದ ಹೊರಬಿದ್ದ ಬೂದಿಯಿಂದ ಕೃಷ್ಣ ನದಿ ನೀರು ಕಲುಷಿತಗೊಂಡಿದೆಯೇ?

ಆ) ಈ ಜಲಮಾಲಿನ್ಯವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ವೀರಕುಮಾರ ಅ. ಪಾಟೀಲ್ (ಇಂದನ ರಾಜ್ಯ ಸಚಿವರು) :—

ಅ) ಇಲ್ಲ

ಆ) ವಿದ್ಯುತ್ ಸ್ಥಾವರದಿಂದ ಹೊರಬಿಟ್ಟ ಬೂದಿಯನ್ನು ನೀರಿನೊಂದಿಗೆ ಮಿಶ್ರಣ ಮಾಡಿ, ಬೂದಿ ಹೊಂಡದಲ್ಲಿ ಶೇಖರಣೆ ಮಾಡಲಾಗುತ್ತಿದೆ. ಬೂದಿ ಹೊಂಡದಿಂದ ತಿಳಿಗೊಂಡ ನೀರನ್ನು ಮಾಲಿನ್ಯ ನಿಯಂತ್ರಣ ಮಂಡಳಿಯ ನಿಯಮಾನುಸಾರ ನದಿಗೆ ಬಿಡಲಾಗುತ್ತಿದೆ.

ಆಡಳಿತ ಮಂಡಳಿ ಸಲ್ಲಿಸಿರುವ ಮಧ್ಯಂತರ ವರದಿ.

2411 (2896) ಶ್ರೀ ಜಿ. ರಾಜುಗೌಡ (ಹನ್ನೂರು) :— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಆಡಳಿತ ಸುಧಾರಣೆ ಆಯೋಗ ಸಲ್ಲಿಸಿರುವ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಸಲ್ಲಿಸಿರುವ ಶಿಫಾರಸ್ಸುಗಳು ಯಾವುವು?

ಆ) ಇವುಗಳಲ್ಲಿ ಯಾವ ಯಾವ ಶಿಫಾರಸ್ಸುಗಳನ್ನು ಕಾರ್ಯರೂಪಕ್ಕೆ ತರಲು ಸರ್ಕಾರ ಇಚ್ಛಿಸುತ್ತದೆ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :—

ಅ) ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಮುಖ್ಯ ಶಿಫಾರಸ್ಸುಗಳು ಈ ಕೆಳಕಂಡಂತಿದೆ.

1. ಸಚಿವಾಲಯದ ಆಡಳಿತ ಸುಧಾರಣೆ
2. ಜಿಲ್ಲಾ ಆಡಳಿತ ಸುಧಾರಣೆ ಮತ್ತು
3. ಉತ್ತಮ ಆಡಳಿತ

ಆ) ಶಿಫಾರಸ್ಸುಗಳನ್ನು ಸಂಬಂಧಿಸಿದ ಇಲಾಖೆಗಳು ಪಾಲಿಸುತ್ತಿದ್ದು, ಆಡಳಿತ ಸುಧಾರಣಾ ಆಯೋಗದ ಮಧ್ಯಂತರ ವರದಿಯನ್ನು ಪರಿಶೀಲಿಸಿ ಸರ್ಕಾರಕ್ಕೆ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ಕೂಡ ರಚಿಸಲಾಗಿದೆ.